1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿಕ್ಕಮಗಳೂರು

**ಸತ್ರ ಮೊಕದ್ದಮೆ ನಂಃ 54/2025**

| | | |
|---|---|---|
| ಸಾಕ್ಷಿದಾರರ ಹೆಸರು | - ಮಂಜುಳಾ ಬಾಯಿ | ಪಿಡಬ್ಲೂ - 15 |
| ಗಂಡನ ಹೆಸರು | - ಅನಿಲ್ ಕುಮಾರ | ಸಿಡಬ್ಲೂ - 29 |
| ವಯಸ್ಸು | - 50 ವರ್ಷ | |
| ಉದ್ಯೋಗ | - ಪೊಲೀಸ್ ಉಪ ನಿರೀಕ್ಷಕರು, ಸಖರಾಯಪಟ್ಟಣ ಪೊಲೀಸ್ ಠಾಣೆ | |
| ವಾಸ ಸ್ಥಳ | - ಸಖರಾಯಪಟ್ಟಣ | |

ದಿನಾಂಕಃ 09-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

(ಆರೋಪಿಯು ನ್ಯಾಯಾಂಗ ಬಂಧನದಲ್ಲಿದ್ದು, ಆತನನ್ನು ಈ ದಿನ ***Google meet*** ನಲ್ಲಿ ವೀಡಿಯೋ ಕಾನ್ಫರೆನ್ಸಿಂಗ್ ಮುಖಾಂತರ ಕಾರಾಗೃಹದಿಂದ ಹಾಜರುಪಡಿಸಲಾಗಿರುತ್ತದೆ. ಸಾಕ್ಷಿಯ ವಿಚಾರಣೆಯನ್ನು ದಾಖಲಿಸುವ ಮೊದಲು ಆರೋಪಿಗೆ ಸಾಕ್ಷಿ ಮಾತನಾಡುವುದು ಸರಿಯಾಗಿ ಕೇಳಿಸುತ್ತಿದೆ ಮತ್ತು ವಿಡಿಯೋ ಕಾನ್ಫರೆನ್ಸಿಂಗ್ ಮುಖಾಂತರ ಸಾಕ್ಷಿಯ ವಿಚಾರಣೆಯನ್ನು ದಾಖಲಿಸಲು ಯಾವುದೇ ತಾಂತ್ರಿಕ ಸಮಸ್ಯೆ ಇಲ್ಲವೆಂದು ಖಾತ್ರಿಪಡಿಸಿಕೊಳ್ಳಲಾಯಿತು.)

ಮುಖ್ಯ ವಿಚಾರಣೆ ವಿಶೇಷ ಸರ್ಕಾರಿ ಅಭಿಯೋಜಕರಿಂದ -

1. ನಾನು ದಿಃ 05-12-2024 ರಿಂದ 20-08-2025 ರವರೆಗೆ ಚಿಕ್ಕಮಗಳೂರು ಮಹಿಳಾ ಪೊಲೀಸ್ ಠಾಣೆಯಲ್ಲಿ

ಪೊಲೀಸ್ ಉಪನಿರೀಕ್ಷಕಳಾಗಿ ವಿಶೇಷ ಕರ್ತವ್ಯದ ಮೇರೆಗೆ ಕಾರ್ಯ ನಿರ್ವಹಿಸಿದ್ದೇನೆ.

2. ದಿಃ 17-01-2025 ರಂದು ಚಾಸಾ.28 ರವರು ಪುತ್ತೂರಿನ ನ್ಯಾಯಾಲಯಕ್ಕೆ ಸಾಕ್ಷ್ಯ ನುಡಿಯಲು ಹೋಗಿದ್ದರು. ಆದ್ದರಿಂದ ನಾನು ಈ ಪ್ರಕರಣದ ಕಡತವನ್ನು ಚಾಸಾ-28 ರವರಿಂದ ಪಡೆದುಕೊಂಡಿದ್ದೆನು.

3. ಆರೋಪಿಯ ಪತ್ತೆಗಾಗಿ ಚಾಸಾ.28 ರವರು ನೇಮಿಸಿದ್ದ ಪ್ರಾಸಾ.12 ಮತ್ತು ಮುಖ್ಯ ಪೇದೆ ನಾಗರಾಜ್ ರವರು ಆರೋಪಿಯನ್ನು ಅದೇ ದಿನ ಅಂದರೆ ದಿಃ 17-01-2025 ರಂದು ಬೆಳಿಗ್ಗೆ 7.15 ಗಂಟೆಗೆ ಚಿಕ್ಕಮಗಳೂರಿನ ಅಜಾದ್ ಪಾರ್ಕ್ ಬಳಿ ವಶಕ್ಕೆ ಪಡೆದು ಬೆಳಿಗ್ಗೆ 7.30 ಗಂಟೆಗೆ ಠಾಣೆಯಲ್ಲಿ ನನ್ನ ಮುಂದೆ ಹಾಜರು ಪಡಿಸಿದರು. ಆ ಬಗ್ಗೆ ಮುಖ್ಯ ಪೇದೆ 54 ನಾಗರಾಜ್ ರವರು ನನಗೆ ವರದಿಯನ್ನು ನೀಡಿದರು. ಸದರಿ ವರದಿಯನ್ನು ಮತ್ತು ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ವರದಿಯನ್ನು ಈಗಾಗಲೇ ನಿಪಿ.22 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸ್ವೀಕೃತಿ ಸಹಿಯನ್ನು ನಿಪಿ.22(ಎ) ಎಂದು ಗುರುತಿಸಲಾಯಿತು. ನಂತರ ನಾನು ಆರೋಪಿಯನ್ನು ದಸ್ತಗಿರಿ ಕ್ರಮ ಅನುಸರಿಸಿ ಬಂಧಿಸಿ, ಆತನನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿ ಸಿಬ್ಬಂದಿ ಮುಖಾಂತರ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದೆನು. ಸಾಕ್ಷಿಯು ಈ ದಿನ ವಿಡಿಯೋ ಕಾನ್ಫರೇನ್ಸಿಂಗ್ ಮುಖಾಂತರ ಹಾಜರುಪಡಿಸಿರುವ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

ಪಾಟೀ ಸವಾಲು: ಆರೋಪಿಯ ಪರವಾಗಿ ಶ್ರೀ ಜಿ.ಎಸ್.ಎಸ್. ವಕೀಲರಿಂದಃ-

4. ಆರೋಪಿಯನ್ನು ಠಾಣೆಯಲ್ಲಿ ನಿಮ್ಮ ಮುಂದೆ ಹಾಜರುಪಡಿಸಿದ್ದಾಗಿ ಹೇಳಿದ್ದೀರಿ ಆ ಸಮಯದಲ್ಲಿ ಆತ ಯಾವ ರೀತಿಯ ಮತ್ತು ಯಾವ ಬಣ್ಣದ ಬಟ್ಟೆಗಳನ್ನು ಧರಿಸಿದ್ದನು ಎಂದು ಹೇಳಲಾಗುತ್ತದೆಯೇ ಎಂದರೆ ಸಾಕ್ಷಿ ತುಂಬಾ ದಿನಗಳಾಗಿರುವ ಕಾರಣ ನೆನಪಿಲ್ಲ ಎನ್ನುತ್ತಾರೆ. ಆರೋಪಿಯನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿದ್ದಾಗಿ ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ಆರೋಪಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧವಿಲ್ಲದಿದ್ದರೂ ಸಹ ನೀವು ಆತನನ್ನು ಬಂಧಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. ನೀವು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಯಾವುದೇ ಹಂತದ ತನಿಖೆಯಲ್ಲಿ ಭಾಗಿಯಾಗಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-

(ಭಾನುಮತಿ ಬಿ.ಸಿ)
1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ